**All India Radio: Bangalore**
**National Bulletin In Kannada**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**11.04.2026 7.35 p.m.**
**<><><><>**

ಮುಖ್ಯಾಂಶಗಳು

೧. ಪಶ್ಚಿಮ ಏಷ್ಯಾದಲ್ಲಿ ಶಾಶ್ವತ ಶಾಂತಿ ಸ್ಥಾಪಿಸಲು ಅಮೆರಿಕ, ಇರಾನ್ ಉನ್ನತ ಮಟ್ಟದ ನಿಯೋಗಗಳ ಮಾತುಕತೆ ಪ್ರಗತಿಯಲ್ಲಿ

೨. ಹಾರ್ಮುಜ್ ಜಲಸಂಧಿ ಸುರಕ್ಷಿತವಾಗಿ ದಾಟಿದ ಭಾರತದ ಧ್ವಜ ಹೊತ್ತ ಎಲ್‌ಪಿಜಿ ಹಡಗು ’ಜಗ್ ವಿಕ್ರಮ್’

೩. ಅಸ್ಸಾಂ, ಕೇರಳಂ, ಪುದುಚೇರಿ ವಿಧಾನಸಭಾ ಚುನಾವಣೆ: ಸುಗಮ ಮತದಾನ ಶ್ಲಾಘಿಸಿದ ಅಂತಾರಾಷ್ಟ್ರೀಯ ಪ್ರತಿನಿಧಿಗಳು

೪. ಐಪಿಎಲ್ ಟಿ-೨೦ ಕ್ರಿಕೆಟ್: ಸನ್‌ರೈಸರ್ ಹೈದರಾಬಾದ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡಕ್ಕೆ ರೋಚಕ ಗೆಲುವು

><><><><><><

ಪಶ್ಚಿಮ ಏಷ್ಯಾದಲ್ಲಿ ಶಾಶ್ವತ ಶಾಂತಿ ಸ್ಥಾಪಿಸಲು ಅಮೆರಿಕ ಮತ್ತು ಇರಾನ್‌ನ ಉನ್ನತ ಮಟ್ಟದ ನಿಯೋಗಗಳು ಇಸ್ಲಾಮಾಬಾದ್‌ನಲ್ಲಿ ಮಾತುಕತೆಗಳಲ್ಲಿ ತೊಡಗಿವೆ. ಅಮೆರಿಕದ ನಿಯೋಗದಲ್ಲಿ ಉಪಾಧ್ಯಕ್ಷ ಜೆಡಿ ವ್ಯಾನ್ಸ್, ವಿಶೇಷ ರಾಯಭಾರಿ ಸ್ಟೀವ್ ವಿಟ್ಕಾಫ್ ಮತ್ತು ಸಲಹೆಗಾರ ಜೇರೆಡ್ ಕುಶ್ನರ್ ಸೇರಿದ್ದಾರೆ. ಇರಾನ್ ನಿಯೋಗವನ್ನು ಸಂಸತ್ ಸ್ಪೀಕರ್ ಮೊಹಮ್ಮದ್ ಬಘರ್ ಗಾಲಿಬಾಫ್ ಪ್ರತಿನಿಧಿಸಿದ್ದಾರೆ. ಎರಡು ವಾರಗಳ ಕದನ ವಿರಾಮದ ನಂತರ ಮಾತುಕತೆಗಳು ನಡೆಯುತ್ತಿವೆ. ಕಾರ್ಯತಂತ್ರದ ಹಾರ್ಮುಜ್ ಜಲಸಂಧಿಯು ಉದ್ವಿಗ್ನತೆಯ ಪ್ರಮುಖ ಅಂಶವಾಗಿ ಉಳಿದಿದೆ.

><><><><><><

ಇರಾನ್‌ನಿಂದ ಅರ್ಮೇನಿಯಾ ಮೂಲಕ ಹೊಸದಾಗಿ ೩೧೨ ಭಾರತೀಯ ಮೀನುಗಾರರನ್ನು ಸುರಕ್ಷಿತವಾಗಿ ಭಾರತಕ್ಕೆ ಸ್ಥಳಾಂತರಿಸಲಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ತಿಳಿಸಿದ್ದಾರೆ. ಇರಾನ್‌ನಿಂದ ಭಾರತೀಯ ಮೀನುಗಾರರನ್ನು ಸುರಕ್ಷಿತವಾಗಿ

ಸ್ಥಳಾಂತರಿಸುವಲ್ಲಿ ಬೆಂಬಲ ನೀಡಿದ್ದಕ್ಕಾಗಿ ಅರ್ಮೇನಿಯಾ ಸರ್ಕಾರ ಮತ್ತು ಅರ್ಮೇನಿಯಾ ವಿದೇಶಾಂಗ ಸಚಿವ ಅರಾರತ್ ಮಿರ್ಜೋಯನ್ ಅವರಿಗೆ ಡಾ. ಜೈಶಂಕರ್ ಕೃತಜ್ಞತೆ ಸಲ್ಲಿಸಿದ್ದಾರೆ.

><><><><><><

ಇತ್ತೀಚೆಗೆ ಘೋಷಿಸಲಾದ ಕದನ ವಿರಾಮವು ಪಶ್ಚಿಮ ಏಷ್ಯಾದಲ್ಲಿ ಶಾಶ್ವತ ಶಾಂತಿ ಮತ್ತು ಭದ್ರತೆಗೆ ದಾರಿ ಮಾಡಿಕೊಡುತ್ತದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಸೌದಿ ಅರೇಬಿಯಾದ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಡಾ. ಮಜೀದ್ ಬಿನ್ ಅಬ್ದುಲ್ಲಾ ಅಲ್ ಕಸ್ಸಾಬಿ ಅವರೊಂದಿಗೆ ವರ್ಚುವಲ್ ಮೂಲಕ ಮಾತುಕತೆ ನಡೆಸಿದ ಸಚಿವ ಪಿಯೂಷ್ ಗೋಯಲ್, ಅಡೆತಡೆಗಳು ಮತ್ತು ಚಂಚಲತೆಯ ನಡುವೆಯೂ ಪೂರೈಕೆ ಸರಪಳಿ ಸ್ಥಿತಿಸ್ಥಾಪಕತ್ವವನ್ನು ಕಾಪಾಡಿಕೊಳ್ಳುವ ಸೌದಿ ಅರೇಬಿಯಾದ ಜನರ ಸಂಕಲ್ಪವನ್ನು ಶ್ಲಾಘಿಸಿದರು. ಸಂಘರ್ಷದ ಸಮಯದಲ್ಲಿ ಸೌದಿ ಅರೇಬಿಯಾದಲ್ಲಿ ನಡೆದ ದಾಳಿಗಳನ್ನು ಸಚಿವ ಪಿಯೂಷ್ ಗೋಯಲ್ ಖಂಡಿಸಿದರು ಮತ್ತು ಭಾರತೀಯ ಸಮುದಾಯವನ್ನು ರಕ್ಷಿಸಲು ಸೌದಿ ಅರೇಬಿಯಾದ ಪ್ರಯತ್ನಗಳನ್ನು ಶ್ಲಾಘಿಸಿದರು. ಸಭೆಯಲ್ಲಿ ಭಾರತ ಮತ್ತು ಸೌದಿ ಅರೇಬಿಯಾ ನಡುವೆ ದ್ವಿಪಕ್ಷೀಯ ವ್ಯಾಪಾರವನ್ನು ಬಲಪಡಿಸುವ ತಮ್ಮ ಬದ್ಧತೆಯನ್ನು ಇಬ್ಬರೂ ಸಚಿವರು ಪುನರುಚ್ಚರಿಸಿದರು.

><><><><><><

ದೇಶೀಯ ಎಲ್‌ಪಿಜಿ ಸಿಲಿಂಡರ್ ವಿತರಣೆ ಸಾಮಾನ್ಯವಾಗಿದ್ದು, ನಿನ್ನೆ ೫೧.೫ ಲಕ್ಷಕ್ಕೂ ಹೆಚ್ಚು ಸಿಲಿಂಡರ್‌ಗಳನ್ನು ವಿತರಿಸಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ತಿಳಿಸಿದೆ. ದೇಶಾದ್ಯಂತ ಅನಧಿಕೃತ ಎಲ್‌ಪಿಜಿ ಸಂಗ್ರಹಣೆ ಮತ್ತು ಅಕ್ರಮವನ್ನು ತಡೆಯಲು ಕ್ರಮಗಳು ಮುಂದುವರೆದಿವೆ. ನಿನ್ನೆ ದೇಶಾದ್ಯಂತ ೩ ಸಾವಿರದ ೪೦೦ ಕ್ಕೂ ಹೆಚ್ಚು ದಾಳಿಗಳನ್ನು ನಡೆಸಲಾಗಿದೆ. ೨೧೪ ಎಲ್‌ಪಿಜಿ ವಿತರಕರಿಗೆ ದಂಡ ವಿಧಿಸಲಾಗಿದೆ. ಮಾರ್ಚ್ ೨೩ ರಿಂದ, ವಲಸೆ ಕಾರ್ಮಿಕರು ಸೇರಿದಂತೆ ವಿದ್ಯಾರ್ಥಿಗಳು ಮತ್ತು ದುರ್ಬಲ ಸಮುದಾಯಗಳಿಗೆ ೧೨ ಲಕ್ಷಕ್ಕೂ ಹೆಚ್ಚು ೫ ಕೆಜಿ ಎಲ್‌ಪಿಜಿ ಸಿಲಿಂಡರ್‌ಗಳನ್ನು ಮಾರಾಟ ಮಾಡಲಾಗಿದೆ. ಇನ್ನೊಂದೆಡೆ, ಭಾರತ ಧ್ವಜ ಹೊತ್ತ ಎಲ್‌ಪಿಜಿ ಹಡಗು 'ಜಗ್ ವಿಕ್ರಮ್' ಇಂದು ಹಾರ್ಮುಜ್ ಜಲಸಂಧಿಯನ್ನು ಸುರಕ್ಷಿತವಾಗಿ ದಾಟಿದೆ. ಈ ಹಡಗು ೨೪ ನಾವಿಕರೊಂದಿಗೆ ಸುಮಾರು ೨೦ ಸಾವಿರದ ೪೦೦ ಎಂಟಿ ಎಲ್‌ಪಿಜಿ ಸರಕುಗಳನ್ನು ಸಾಗಿಸುತ್ತಿದೆ. ಇದು ಏಪ್ರಿಲ್ ೧೫ ರಂದು ಮುಂಬೈಗೆ ಆಗಮಿಸುವ ನಿರೀಕ್ಷೆಯಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವಾಲಯ ಮಾಹಿತಿ ನೀಡಿದೆ.

><><><><><><

ಅಸ್ಸಾಂ, ಕೇರಳಂ ಮತ್ತು ಪುದುಚೇರಿಯಲ್ಲಿ ನಡೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ೨೨ ದೇಶಗಳ ಅಂತಾರಾಷ್ಟ್ರೀಯ ಪ್ರತಿನಿಧಿಗಳು ಭಾರತದ ಚುನಾವಣಾ ಪ್ರಕ್ರಿಯೆಯನ್ನು ಶ್ಲಾಘಿಸಿದ್ದಾರೆ. ಚುನಾವಣಾ ಆಯೋಗ ಆಯೋಜಿಸಿದ್ದ ಅಂತಾರಾಷ್ಟ್ರೀಯ ಚುನಾವಣಾ ಸಂದರ್ಶಕರ ಕಾರ್ಯಕ್ರಮ ೨೦೨೬ರ ಭಾಗವಾಗಿ ಒಟ್ಟು ೩೮ ಪ್ರತಿನಿಧಿಗಳು ಎರಡು ದಿನಗಳ ಭಾರತ ಭೇಟಿಯಲ್ಲಿದ್ದರು. ಸುಗಮ ಮತದಾನ ಮತ್ತು ಹೆಚ್ಚಿನ ಮತದಾರರು ಮತದಾನದಲ್ಲಿ ತೊಡಗಿದ್ದನ್ನು ಅವರು ಶ್ಲಾಘಿಸಿದ್ದಾರೆ. ಮತದಾನ ಕೇಂದ್ರಗಳ ೧೦೦ ಪ್ರತಿಶತ ವೆಬ್‌ಕಾಸ್ಟಿಂಗ್ ಅನ್ನು ಮೇಲ್ವಿಚಾರಣೆ ಮಾಡುವ ಸಿಸಿಟಿವಿ ನಿಯಂತ್ರಣ ಕೊಠಡಿಗಳನ್ನು ಪ್ರತಿನಿಧಿಗಳು ಪರಿಶೀಲಿಸಿದರು. ಇದು ಪಾರದರ್ಶಕತೆಯ ಬಲವಾದ ಆಧಾರಸ್ತಂಭವಾಗಿದೆ ಎಂದು ಹೇಳಿದ ಪ್ರತಿನಿಧಿಗಳು, ಅಸ್ಸಾಂನ ಕಾಮರೂಪ, ಕೇರಳಂ ನ ಕೊಚ್ಚಿ ಮತ್ತು ತಿರುವನಂತಪುರಂ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ಮತದಾನ ಪ್ರಕ್ರಿಯೆಯನ್ನು ವೀಕ್ಷಿಸಿದರು. ಅವರು ಮೇಲ್ವಿಚಾರಣಾ ಕೇಂದ್ರಗಳಿಗೆ ಭೇಟಿ ನೀಡಿ ಇವಿಎಂಗಳು, ಡ್ರೋನ್ ಆಧಾರಿತ ಕಣ್ಗಾವಲು ಸೇರಿದಂತೆ ತಂತ್ರಜ್ಞಾನದ ಬಳಕೆಯನ್ನು ಗಮನಿಸಿದರು.

><><><><><><

ನಿರಾಶ್ರಿತರಿಗೆ ಸಂಪೂರ್ಣ ಸಾಂವಿಧಾನಿಕ ಹಕ್ಕುಗಳನ್ನು ನೀಡಲಾಗುವುದು ಮತ್ತು ನುಸುಳುಕೋರರನ್ನು ಹೊರಹಾಕಲಾಗುವುದು ಎಂದು ಬಿಜೆಪಿ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ ಪಶ್ಚಿಮ ಬಂಗಾಳದಲ್ಲಿಂದು ಹೇಳಿದ್ದಾರೆ. ವಿಧಾನಸಭೆ ಚುನಾವಣೆ ಹಿನ್ನೆಲೆಯಲ್ಲಿ ಪಶ್ಚಿಮ ಬಂಗಾಳದ ಕಟ್ವಾದಲ್ಲಿ ಇಂದು ಸಾರ್ವಜನಿಕ ರ್‍ಯಾಲಿ ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರ ರಚನೆಯಾದ ನಂತರ, ಎಲ್ಲಾ ಅರ್ಹ ಅರ್ಜಿದಾರರಿಗೆ ಪೌರತ್ವ ತಿದ್ದುಪಡಿ ಕಾಯ್ದೆಯಡಿ ಪೌರತ್ವ ನೀಡುವ ಪ್ರಕ್ರಿಯೆಯನ್ನು ವೇಗಗೊಳಿಸಲಾಗುವುದು ಎಂದು ಭರವಸೆ ನೀಡಿದರು. ೧೫ ವರ್ಷಗಳ ತೃಣಮೂಲ ಕಾಂಗ್ರೆಸ್ ಆಡಳಿತವು ಪಶ್ಚಿಮ ಬಂಗಾಳದ ಪ್ರತಿಯೊಬ್ಬ ನಾಗರಿಕರಿಗೂ ಭಯದ ವಾತಾವರಣ ಮಾತ್ರ ನೀಡಿದೆ ಎಂದು ಆರೋಪಿಸಿದರು. ರಾಜ್ಯದಲ್ಲಿ ರಾಜಕೀಯ ಹಿಂಸಾಚಾರದಲ್ಲಿ ತೊಡಗಿರುವವರ ವಿರುದ್ಧ ಬಿಜೆಪಿ ಕಠಿಣ ಕ್ರಮ ಕೈಗೊಳ್ಳುತ್ತದೆ. ನುಸುಳುಕೋರರು ಗಂಟು-ಮೂಟೆ ಕಟ್ಟಿ ಹೊರಡುವ ಸಮಯ ಬಂದಿದೆ. ಅಕ್ರಮ ವಲಸಿಗರಿಗೆ ಸಹಾಯ ಮಾಡಿದವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

><><><><><><

ತಮಿಳುನಾಡಿನಲ್ಲಿ, ಚುನಾವಣಾ ಆಯೋಗವು ರಾಜ್ಯ ಗೃಹ ಕಾರ್ಯದರ್ಶಿ ಧೀರಜ್ ಕುಮಾರ್ ಅವರನ್ನು ವರ್ಗಾವಣೆ ಮಾಡಿದೆ. ಮಣಿವಾಸನ್ ಅವರನ್ನು ಗೃಹ ಕಾರ್ಯದರ್ಶಿಯಾಗಿ ಚುನಾವಣಾ ಆಯೋಗ ನೇಮಿಸಿದೆ. ಇದಕ್ಕೂ ಮೊದಲು ಚುನಾವಣಾ ಆಯೋಗವು ಮುಖ್ಯ ಕಾರ್ಯದರ್ಶಿ ಎನ್. ಮುರುಗಾನಂದಂ, ಡಿಜಿಪಿ ವಿಜಿಲೆನ್ಸ್ - ಡೇವಿಡ್, ದೇವಶಿರ್ವತಂ ಮತ್ತು ಚೆನ್ನೈ ಪೊಲೀಸ್ ಆಯುಕ್ತ ಅರುಣ್ ಅವರನ್ನು ವರ್ಗಾಯಿಸಿದೆ.

><><><><><><

ಮಧ್ಯಪ್ರದೇಶದ ಕುನೊ ರಾಷ್ಟ್ರೀಯ ಉದ್ಯಾನವನದಲ್ಲಿ ಭಾರತೀಯ ಮೂಲದ ಹೆಣ್ಣು ಚಿರತೆಯೊಂದು ನಾಲ್ಕು ಮರಿಗಳಿಗೆ ಜನ್ಮ ನೀಡಿದೆ. ಈ ಬೆಳವಣಿಗೆಯು ದೇಶದ ಚಿರತೆ ಸಂರಕ್ಷಣಾ ಪ್ರಯಾಣದಲ್ಲಿ ಒಂದು ಐತಿಹಾಸಿಕ ಮೈಲಿಗಲ್ಲು ಎಂದು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಖಾತೆ ಸಚಿವ ಭೂಪೇಂದರ್ ಯಾದವ್ ಹೇಳಿದ್ದಾರೆ.

><><><><><><

ಸಾಂಪ್ರದಾಯಿಕ ಈಸ್ಟರ್ ಹಿನ್ನೆಲೆಯಲ್ಲಿ ರಷ್ಯಾ ಪ್ರಸ್ತಾಪಿಸಿದ ಕದನ ವಿರಾಮಕ್ಕೂ ಮುನ್ನ, ಉಕ್ರೇನ್‌ನ ಒಡೆಸಾ ನಗರದಲ್ಲಿ ರಾತ್ರಿಯಿಡೀ ನಡೆದ ಡ್ರೋನ್ ದಾಳಿಯಲ್ಲಿ ಇಬ್ಬರು ಸಾವನ್ನಪ್ಪಿದ್ದು, ಇತರೆ ಇಬ್ಬರು ಗಾಯಗೊಂಡಿದ್ದಾರೆ. ಡ್ರೋನ್‌ಗಳ ದಾಳಿಯಿಂದ ವಸತಿ ಪ್ರದೇಶಗಳು, ಅಪಾರ್ಟ್‌ಮೆಂಟ್ ಕಟ್ಟಡಗಳು, ಮನೆಗಳು ಮತ್ತು ಶಿಶುವಿಹಾರ ಹಾನಿಯಾಗಿವೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ. ಉದ್ದೇಶಿತ ಕದನ ವಿರಾಮ ಜಾರಿಗೆ ಬರುವ ಕೆಲವೇ ಗಂಟೆಗಳ ಮೊದಲು, ರಷ್ಯಾ, ರಾತ್ರೋರಾತ್ರಿ ೧೬೦ ಡ್ರೋನ್‌ಗಳನ್ನು ಹಾರಿಸಿತು. ಅವುಗಳಲ್ಲಿ ೧೩೩ ಅನ್ನು ಹೊಡೆದುರುಳಿಸಲಾಗಿದೆ ಎಂದು ಉಕ್ರೇನ್ ವಾಯುಪಡೆ ತಿಳಿಸಿದೆ.  ಇನ್ನೊಂದೆಡೆ, ಉಕ್ರೇನ್‌ನ ೯೯ ಡ್ರೋನ್‌ಗಳನ್ನು ಹೊಡೆದುರುಳಿಸಲಾಗಿದೆ ಎಂದು ರಷ್ಯಾದ ರಕ್ಷಣಾ ಸಚಿವಾಲಯ ತಿಳಿಸಿದೆ.

><><><><><><

ಚಂಡೀಗಢದ ಮಹಾರಾಜ ಯದವೀಂದ್ರ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆದ ಇಂಡಿಯನ್ ಪ್ರೀಮಿಯರ್ ಲೀಗ್ - ಐಪಿಎಲ್ ಟಿ-೨೦ ಕ್ರಿಕೆಟ್‌ನ ದಿನದ ಮೊದಲ ಪಂದ್ಯದಲ್ಲಿ ಸನ್‌ರೈಸರ್ ಹೈದರಾಬಾದ್ ವಿರುದ್ಧ ಪಂಜಾಬ್ ಕಿಂಗ್ಸ್ ತಂಡ ೬ ವಿಕೆಟ್ ಗಳಿಂದ ರೋಚಕ ಗೆಲುವು ಸಾಧಿಸಿದೆ.  ಮೊದಲು ಬ್ಯಾಟಿಂಗ್ ಮಾಡಿದ ಸನ್‌ರೈಸರ್ ಹೈದರಾಬಾದ್ ತಂಡ ನಿಗದಿತ ೨೦ ಓವರ್‌ಗಳಲ್ಲಿ ೬ ವಿಕೆಟ್ ನಷ್ಟಕ್ಕೆ ೨೧೯ ರನ್ ಗಳಿಸಿತು. ಗೆಲುವಿನ ಗುರಿ ಬೆನ್ನತ್ತಿದ ಪಂಜಾಬ್ ಕಿಂಗ್ಸ್ ೧೮.೫ ಓವರ್‌ಗಳಲ್ಲಿ ೪ ವಿಕೆಟ್ ನಷ್ಟಕ್ಕೆ ೨೨೩ ರನ್ ಗಳಿಸಿ

ಗೆಲುವಿನ ನಗೆ ಬೀರಿತು. ಚೆನ್ನೈನ ಎಂ.ಎ.ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದಿನದ ಮತ್ತೊಂದು ಐಪಿಎಲ್ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ. ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

><><><><><><

ಮಧ್ಯಪ್ರದೇಶದ ರಾಯಸೇನ್ ಜಿಲ್ಲೆಯ ದಶೇರಾ ಮೈದಾನದಲ್ಲಿ ಮೂರು ದಿನಗಳ ಉನ್ನತ್ ಕೃಷಿ ಮಹೋತ್ಸವವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಇಂದು ಉದ್ಘಾಟಿಸಿದರು. ಇಂದಿನಿಂದ ಇದೇ ೧೨ ರವರೆಗೆ ನಡೆಯುವ ಈ ಉತ್ಸವದಲ್ಲಿ ಡ್ರೋನ್‌ಗಳು, ಸೌರ ಪಂಪ್‌ಗಳು, ಸಣ್ಣ ನೀರಾವರಿ ಸೇರಿದಂತೆ ಆಧುನಿಕ ತಂತ್ರಜ್ಞಾನಗಳ ಪ್ರದರ್ಶನ ನಡೆಯಲಿವೆ. ಕೃಷಿಯಲ್ಲಿ ಕೃತಕ ಬುದ್ಧಿಮತ್ತೆ ಬಳಕೆಯಿಂದ ಹಿಡಿದು ಸಮಗ್ರ ಕೃಷಿಯವರೆಗಿನ ವಿವಿಧ ವಿಷಯಗಳ ಕುರಿತು ತಜ್ಞರು ರೈತರೊಂದಿಗೆ ನೇರವಾಗಿ ಸಂವಾದ ನಡೆಸಲಿದ್ದಾರೆ.

><><><><><><

ಎಸ್‌ಎಸ್‌ಸಿ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ಪಶ್ಚಿಮ ಬಂಗಾಳದ ಮಾಜಿ ಶಿಕ್ಷಣ ಸಚಿವ ಪಾರ್ಥ ಚಟರ್ಜಿ ಮತ್ತು ಇತರರಿಗೆ ಸೇರಿದ ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ ಇಂದು ಶೋಧ ನಡೆಸಿದೆ. ಕೋಲ್ಕತ್ತಾದ ಎರಡು ಸ್ಥಳಗಳಲ್ಲಿ ಇಡಿ ಶೋಧ ನಡೆಸಿದೆ. ಪಾರ್ಥ ಚಟರ್ಜಿ ಅವರ ನಿವಾಸ ಮತ್ತು ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿರುವ ಪ್ರಸನ್ನ ಕುಮಾರ್ ರಾಯ್ ಅವರ ಕಚೇರಿಯಲ್ಲಿ ಶೋಧ ನಡೆಸಲಾಗುತ್ತಿದೆ ಎಂದು ಇಡಿ ತಿಳಿಸಿದೆ. ಎಸ್‌ಎಸ್‌ಸಿ ನೇಮಕಾತಿ ಹಗರಣದಲ್ಲಿ ತನಿಖಾಧಿಕಾರಿಯ ಮುಂದೆ ಹಾಜರಾಗಲು ಪಾರ್ಥ ಚಟರ್ಜಿ ಅವರಿಗೆ ಮೂರು ಬಾರಿ ಸಮನ್ಸ್ ಜಾರಿ ಮಾಡಲಾಗಿದೆ. ಆದರೆ ಅವರು ಇದುವರೆಗೂ ಹಾಜರಾಗಿಲ್ಲ ಎಂದು ಇಡಿ ಅಧಿಕಾರಿಗಳು ತಿಳಿಸಿದ್ದಾರೆ. ಪ್ರಾಥಮಿಕ ಶಿಕ್ಷಕರ ನೇಮಕಾತಿ ಹಗರಣಕ್ಕೆ ಸಂಬಂಧಿಸಿದಂತೆ ೨೦೨೨ ರ ಜುಲೈನಲ್ಲಿ ಇಡಿ ಅವರನ್ನು ಬಂಧಿಸಿತ್ತು. ೨೦೨೫ ರ ಆರಂಭದಲ್ಲಿ ಸುಪ್ರೀಂ ಕೋರ್ಟ್ ಅವರಿಗೆ ಷರತ್ತುಬದ್ಧ ಜಾಮೀನು ನೀಡಿತು.

><><><><><><

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಎರಡು ದಿನಗಳ ಮಾರಿಷಸ್ ಭೇಟಿಯನ್ನು ಯಶಸ್ವಿಯಾಗಿ ಪೂರೈಸಿದ್ದಾರೆ.ಸಾಮಾಜಿಕ ಜಾಲತಾಣದಲ್ಲಿ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರ ಮಾರಿಷಸ್ ಭೇಟಿಯು

ಆರೋಗ್ಯ, ಹಸಿರು ಚಲನಶೀಲತೆ, ಸಾಮರ್ಥ್ಯ ವೃದ್ಧಿ, ಶಿಕ್ಷಣ ಮತ್ತು ಮೂಲಸೌಕರ್ಯ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಗಣನೀಯ ಫಲಿತಾಂಶಗಳನ್ನು ಸಾಧಿಸಿದೆ ಎಂದು ಹೇಳಿದ್ದಾರೆ.

><><><><><><><